# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು, ತೋರಣಗಟ್ಟೆ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿ ಇವರ ಪತ್ರ ಸಂಖ್ಯೆ:ಜಿಪಂದಾಆ(2):ಗ್ರಾಪಂ:ಸಿಆರ್:16/2017-18, ದಿನಾಂಕ:17-06-2017 ಮತ್ತು ಜಿಪಂದಾಆ(2):ಗ್ರಾಪಂ:ಸಿಆರ್:02/2017-18, ದಿನಾಂಕ:19-06-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ:17-07-2017.
3) ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು, ತೋರಣಗಟ್ಟೆ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಲಿಖಿತ ಹೇಳಿಕೆ ದಿನಾಂಕ:14-08-2017.
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:28-10-2017.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿ ರವರು ಜಗಳೂರು ತಾಲ್ಲೂಕು ತೋರಣಗಟ್ಟೆ ಗ್ರಾಮ ಪಂಚಾಯತಿಯಲ್ಲಿ 2015-16 ಮತ್ತು 2016-17ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನದಲ್ಲಿ ಹಣದುರುಪಯೋಗವಾದ ಬಗ್ಗೆ ದೂರು ಬಂದ ಹಿನ್ನಲೆಯಲ್ಲಿ ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.) &(ಎಸ್.ಜಿ.ಎಸ್.ವೈ.) ರವರಿಂದ ತನಿಖೆ ನಡೆಸಿ 07 ಕಾಮಗಾರಿಗಳ ಅನುಷ್ಠಾನದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ರೂ.11,27,019/-ಗಳನ್ನು ಪಾವತಿಸಿ ಸರ್ಕಾರದ ಹಣ ದುರುಪಯೋಗಕ್ಕೆ ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು, ತೋರಣಗಟ್ಟೆ ಗ್ರಾಮ ಪಂಚಾಯತಿ ಇವರು ಪರೋಕ್ಷವಾಗಿ ಸಹಕರಿಸಿರುವುದು ಕಂಡುಬರುತ್ತದೆ. ಆದ್ದರಿಂದ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ 2016-17ನೇ ಸಾಲಿನ 14ನೇ ಹಣಕಾಸು ಹಾಗೂ ಬಿ.ಆರ್.ಜಿ.ಎಫ್. ಯೋಜನೆಯಲ್ಲಿ ಹಳ್ಳಿಗಳಲ್ಲಿ ಕುಡಿಯುವ ನೀರು ಹಾಗೂ ವಿವಿಧ ಕಾಮಗಾರಿ ಬಗ್ಗೆ ಸರ್ಕಾರದಿಂದ ಹಣ ಬಿಡುಗಡೆಯಾಗಿದ್ದು, ಸದಸ್ಯರ ಗಮನಕ್ಕೆ ತಾರದೆ ಹಳ್ಳಿಗಳಲ್ಲಿ ಕಾಮಗಾರಿ ಮಾಡಿರುವುದಾಗಿ ಜಗಳೂರಿನ ಪೂಜ ಎಂಟರ್ ಪ್ರೈಸಸ್, ನವಕರ್ ಎಲೆಕ್ಟ್ರಿಕಲ್ಸ್ ಮತ್ತು ಅಜಯ್ ಏಜೆನ್ಸಿ ಇವರಿಗೆ ಕಾಮಗಾರಿ ಮಾಡದೇ ಅಧ್ಯಕ್ಷರು ಹಾಗೂ ಪಿ.ಡಿ.ಓ ಸೇರಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸ್ವಂತಕ್ಕೆ ಬಳಸಿಕೊಂಡು ಅವ್ಯವಹಾರ ಮಾಡಿರುತ್ತಾರೆ ಎಂದು ಗ್ರಾಮ ಪಂಚಾಯತಿ ಉಪಾಧ್ಯಕ್ಷರು ಹಾಗೂ ಸದಸ್ಯರು ದೂರು ಸಲ್ಲಿಸಿದ ಮೇರೆಗೆ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ದಾವಣಗೆರೆ ರವರಿಂದ ಲೆಕ್ಕ ತಪಾಸಣೆ ನಡೆಸಿ ವರದಿಯಲ್ಲಿ ವಿವಿಧ ಏಜೆನ್ಸಿಗಳಿಗೆ ಕೆ.ಟಿ.ಪಿ.ಪಿ. ನಿಯಮ ಉಲ್ಲಂಘಿಸಿ ರೂ.2,01,409/-ಗಳನ್ನು ಪಾವತಿಸಿ ಸರ್ಕಾರದ ಹಣ ದುರುಪಯೋಗವಾಗಿರುವುದು ಕಂಡುಬರುತ್ತದೆಂದು ತಿಳಿಸಿರುತ್ತಾರೆ ಹಾಗೂ ಇತರೇ ಏಜೆನ್ಸಿಗಳಿಂದ ರೂ.22,44,976-50/-ಗಳ ಮೊತ್ತದ ವಿವಿಧ ಸಾಮಾಗ್ರಿಗಳನ್ನು ಖರೀಧಿಸಿ ಮಾರ್ಗಸೂಚಿಯನ್ನು ಉಲ್ಲಂಘಿಸಿ ಹಣ ಬಿಡುಗಡೆ ಮಾಡಿ ಕರ್ತವ್ಯಲೋಪವೆಸಗಿ ಸರ್ಕಾರದ ಹಣ ದುರುಪಯೋಗಕ್ಕೆ ಕಾರಣರಾಗಿರುವುದು ಕಂಡುಬರುತ್ತದೆಂದು ತಿಳಿಸಿರುತ್ತಾರೆ. 14ನೇ ಹಣಕಾಸು ಯೋಜನೆಯ ಲೆಕ್ಕ ತನಿಖಾ ವರದಿಯಲ್ಲಿ ರೂ.9,78,160/-ಗಳಿಗೆ ಯಾವುದೇ ದಾಖಲೆಗಳನ್ನು ಒದಗಿಸದೇ ಇರುವುದು ಸಹ ಕಂಡುಬರುತ್ತದೆ. ಸಾಮಾಗ್ರಿಗಳನ್ನು ಖರೀದಿಸಿದ ಮೊತ್ತಕ್ಕೆ ದಾಖಲೆಗಳನ್ನು ಸರಿಯಾಗಿ ನಿರ್ವಹಿಸದೇ ಸರ್ಕಾರದ ಹಣ ದುರುಪಯೋಗಕ್ಕೆ ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು, ತೋರಣಗಟ್ಟೆ ಗ್ರಾಮ ಪಂಚಾಯತಿ ಇವರು ಪರೋಕ್ಷವಾಗಿ ಸಹಕರಿಸಿರುವುದು ಕಂಡು ಬರುತ್ತದೆ. ಆದ್ದರಿಂದ ಆ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ಸಾವಿತ್ರಮ್ಮ ಇವರು

2..

ಜವಾಬ್ದಾರರಾಗಿರುವುದರಿಂದ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

ಅದರಂತೆ ಮೇಲೆ ಓದಲಾದ (3)ರಲ್ಲಿ ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು ಸಲ್ಲಿಸಿರುವ ಉತ್ತರದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಕಾರ್ಯನಿರ್ವಹಿಸಿರುತ್ತೇನೆ. ಕೂಲಿ ಕಾರ್ಮಿಕರಿಗೆ ಎಫ್.ಟಿ.ಓ ಮುಖಾಂತರ ಬ್ಯಾಂಕ್ ಖಾತೆಗಳಿಗೆ ಹಣ ಜಮೆ ಮಾಡಿರುತ್ತೇವೆ ಎಂದು ಹೇಳಿರುತ್ತಾರೆ. 14ನೇ ಹಣಕಾಸು ಯೋಜನೆಯಲ್ಲಿ ವೆಚ್ಚ ಭರಿಸಿದಕ್ಕೆ ಸಂಬಂಧಿಸಿದಂತೆ ಲೋಪದೋಷಗಳಿಗೆ ಸರ್ಕಾರಿ ಅಧಿಕಾರಿಗಳು ಹೊಣೆಯಾಗಿರುತ್ತಾರೆ. ಇದು ನನಗೆ ಸಂಬಂಧವಿರುವುದಿಲ್ಲ. ಈ ಎಲ್ಲಾ ಆರೋಪಗಳಿಂದ ನನ್ನನ್ನು ಕೈಬಿಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (4)ರಲ್ಲಿ ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ:09-11-2017 ರಂದು ಜರುಗಿದ ವಿಚಾರಣೆಯಲ್ಲಿ ಕಾರ್ಯದರ್ಶಿ, ತೋರಣಗಟ್ಟೆ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಅಧಿಕಾರಿಗಳು ಹಾಗೂ ಆಪಾದಿತ ಅಧ್ಯಕ್ಷರು ಹಾಜರಿರುತ್ತಾರೆ.

ಸರ್ಕಾರವು ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಅಧ್ಯಕ್ಷರು ತಮ್ಮ ಕರ್ತವ್ಯ ಸರಿಯಾಗಿ ನಿರ್ವಹಿಸದೇ ಇರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4) ರನ್ವಯ ತೋರಣಗಟ್ಟೆ ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 794 ಗ್ರಾಪಂಅ 2017 ಬೆಂಗಳೂರು, ದಿನಾಂಕ:09-04-2018.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು, ತೋರಣಗಟ್ಟೆ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ತಮ್ಮ ಕರ್ತವ್ಯ ಸರಿಯಾಗಿ ನಿರ್ವಹಿಸದೇ ಇರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 48(4) ರನ್ವಯ ತೋರಣಗಟ್ಟೆ ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

9/4

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**<u>ಪ್ರತಿ:</u>**

1) ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಜಗಳೂರು, ದಾವಣಗೆರೆ ಜಿಲ್ಲೆ.
4) ಶ್ರೀಮತಿ ಸಾವಿತ್ರಮ್ಮ ಕೋಂ ಸಿದ್ದಪ್ಪ, ಅಧ್ಯಕ್ಷರು, ತೋರಣಗಟ್ಟೆ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತೋರಣಗಟ್ಟೆ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
7) ಗಣಕ ಕೋಶ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.